# ಕರ್ನಾಟಕ ಸರ್ಕಾರದ ನಡವಳಿ

ವಿಷಯ:- ಶ್ರೀ ಎಂ.ಪ್ರಸಾದ್, ಗ್ರೇಡ್-1 ಕಾರ್ಯದರ್ಶಿ, ಸಮ್ಮೇತನಹಳ್ಳಿ ಗ್ರಾಮ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಸರ್ಕಾರಕ್ಕೆ ಸಲ್ಲಿಸಿರುವ ಮೇಲ್ಮನವಿಯ ಬಗ್ಗೆ ಆದೇಶ.

ಓದಲಾಗಿದೆ:-
1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಆದೇಶ ಸಂಖ್ಯೆ:ಬೆಂಗ್ರಾಜಿಪಂ/ಸಿ6/ಸಿಸಿಎ/03/2016-17, ದಿನಾಂಕ:26.09.2018.
2) ಶ್ರೀ ಎಂ.ಪ್ರಸಾದ್, ಗ್ರೇಡ್-1 ಕಾರ್ಯದರ್ಶಿ, ಸಮ್ಮೇತನಹಳ್ಳಿ ಗ್ರಾಮ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಸರ್ಕಾರಕ್ಕೆ ಸಲ್ಲಿಸಿರುವ ಮೇಲ್ಮನವಿ ದಿನಾಂಕ:03.12.2018
3) ಸರ್ಕಾರದಿಂದ ವಿಚಾರಣೆಗೆ ಹಾಜರಾಗಲು ನೀಡಿದ ತಿಳುವಳಿಕೆ ಪತ್ರ ದಿನಾಂಕ:01-02-2019.

**ಪ್ರಸ್ತಾವನೆ :-**

ಶ್ರೀ ಎಂ. ಪ್ರಸಾದ್, ಗ್ರೇಡ್-1 ಕಾರ್ಯದರ್ಶಿ, ಸಮ್ಮೇತನಹಳ್ಳಿ ಗ್ರಾಮ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಸಮೇತನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಎಸಗಿದರೆನ್ನಲಾದ ಆರೋಪಗಳಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಸಂಖ್ಯೆ:ಬೆಂಗ್ರಾಜಿಪಂ/ಸಿ.6/ಸಿ.ಸಿ.ಎ/03/2016-17, ದಿನಾಂಕ:26.09.2018ರ ಆದೇಶದಲ್ಲಿ ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957ರ ನಿಯಮ 8ರಂತೆ ಸದರಿ ನೌಕರರ ಮುಂದಿನ 2 ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಿರುತ್ತಾರೆಂದು ಮೇಲೆ ಓದಲಾದ (1)ರ ಆದೇಶದ ವಿರುದ್ಧ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಶ್ರೀ ಎಂ. ಪ್ರಸಾದ್, ಗ್ರೇಡ್-1 ಕಾರ್ಯದರ್ಶಿರವರು ದಾಖಲಿಸಿದ್ದ ಅರ್ಜಿ ಸಂಖ್ಯೆ:7378/2018ಕ್ಕೆ ಮಾನ್ಯ ನ್ಯಾಯಾಲಯವು ದಿನಾಂಕ:12.10.2018ರಂದು ನೀಡಿರುವ ಆದೇಶದಲ್ಲಿ ಅಪೀಲು ಪ್ರಾಧಿಕಾರವಾದ ಸರ್ಕಾರಕ್ಕೆ ಮೇಲ್ಮನವಿ ಸಲ್ಲಿಸುವಂತೆ ಆದೇಶಿರುವುದರನ್ವಯ ಮೇಲೆ ಓದಲಾದ ಕ್ರಮಾಂಕ(2)ರಲ್ಲಿ ಶ್ರೀ ಪ್ರಸಾದ್‌ರವರು ದಿನಾಂಕ:03.12.2018ರಂದು ಮೇಲ್ಮನವಿ ಪ್ರಾಧಿಕಾರಕ್ಕೆ ಮೇಲ್ಮನವಿಯನ್ನು ಸಲ್ಲಿಸಿದ್ದಾರೆ.

ಸದರಿ ಮೇಲ್ಮನವಿಯಲ್ಲಿನ ಪ್ರಮುಖ ಅಂಶಗಳ ಬಗ್ಗೆ ದಿನಾಂಕ:06.02.2019ರಂದು ವಿಚಾರಣೆ ನಡೆಸಲಾಯಿತು. ಸದರಿ ವಿಚಾರಣೆಗೆ ಮೇಲ್ಮನವಿದಾರರ ಪರವಾಗಿ ಶ್ರೀ ಎನ್.ಎಸ್.ನಾಗರಾಜು, ವಕೀಲರು, ಹಾಜರಿದ್ದರು, ಶಿಸ್ತುಪ್ರಾಧಿಕಾರದ ಪರವಾಗಿ ಶ್ರೀ ಕೆ.ಕರಿಯಪ್ಪ, ಉಪ ಕಾರ್ಯದರ್ಶಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್‌ರವರು ಹಾಜರಿದ್ದರು.

ಮೇಲ್ಮನವಿದಾರರ ಪರವಾಗಿ ವಾದ ಮಂಡಿಸಿದ ವಕೀಲರು, ಗ್ರಾಮ ಪಂಚಾಯಿತಿ ಕಾರ್ಯದರ್ಶಿಯವರಿಗೆ ಗ್ರಾಮ ಪಂಚಾಯಿತಿಯ ಯಾವುದೇ ಆರ್ಥಿಕ ವ್ಯವಹಾರದಲ್ಲಿ ಪಾತ್ರವಿರುವುದಿಲ್ಲ. ಈ ಜವಾಬ್ದಾರಿಯು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯದ್ದಾಗಿರುತ್ತದೆ. ಈ ಬಗ್ಗೆ ಇಲಾಖಾ ವಿಚಾರಣೆ ವೇಳೆಯಲ್ಲಿ ತಮ್ಮ ಸಮರ್ಥನೆಯನ್ನು ನೀಡಿರುವುದಾಗಿ ತಿಳಿಸಿರುತ್ತಾರೆ.

ಶಿಸ್ತು ಪ್ರಾಧಿಕಾರದ ಪರವಾಗಿ ಹಾಜರಿದ್ದ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿಯವರಾದ ಶ್ರೀ ಕೆ.ಕರಿಯಪ್ಪ,ರವರು ಗ್ರಾಮ ಪಂಚಾಯಿತಿಯ ಕರ್ತವ್ಯ ನಿರ್ವಹಣೆಯಲ್ಲಿ ಕಾರ್ಯದರ್ಶಿಯವರ ಜವಾಬ್ದಾರಿ ಇದ್ದು, ಮೇಲ್ಮನವಿದಾರರ ಕರ್ತವ್ಯಲೋಪ ಮತ್ತು ಕರ್ತವ್ಯ ನಿರ್ಲಕ್ಷತೆಯು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಮೇಲ್ಮನವಿದಾರರ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿ ಗ್ರಾಮ ಪಂಚಾಯಿತಿಯ ಕಾರ್ಯನಿರ್ವಹಣೆಯಲ್ಲಿ ಕಾರ್ಯದರ್ಶಿಯು ಕರ್ತವ್ಯಲೋಪವೆಸಗಿರುವುದು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುವುದನ್ನು ಪರಿಗಣಿಸಿ ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು 1957ರ ನಿಯಮ - 8ರಡಿ ಸದರಿ ನೌಕರರ ಮೇಲೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ವಿಧಿಸಿರುವ ದಂಡನಾದೇಶವನ್ನು ಮಾರ್ಪಡಿಸಿ ಮುಂದಿನಂತೆ ಆದೇಶಿಸಿದೆ,

..2

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/583/ಗ್ರಾಪಂಕಾ/2017, ಬೆಂಗಳೂರು, ದಿನಾಂಕ:02-04-2019</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 25 (2)(ಸಿ)(i)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರವು, ಶಿಸ್ತುಪ್ರಾಧಿಕಾರವಾದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಆದೇಶ ಸಂಖ್ಯೆ: ಬೆಂಗ್ರಾಜಿಪಂ/ಸಿ6/ಸಿಸಿಎ/03/2016-17, ದಿನಾಂಕ: 26.09.2018ನ್ನು ಮಾರ್ಪಡಿಸಿ, ಎರಡು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ರಹಿತವಾಗಿ ತಡೆಹಿಡಿಯುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

2/04/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿಗಳು:</u>

1) ಮಹಾಲೇಖಪಾಲರು(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
4) ಶ್ರೀ ಎಂ.ಪ್ರಸಾದ್, ಗ್ರೇಡ್-1 ಕಾರ್ಯದರ್ಶಿ, ಸಮ್ಮೇತನಹಳ್ಳಿ ಗ್ರಾಮ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
5) ಗಣಕ ಕೋಶ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.